# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ

(ಸಾಂಸದಿಕ ಹಾಗೂ ಇತರ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಮಂಗಳವಾರ, 21ನೇ ನವೆಂಬರ್ 2023

ಸಂಖ್ಯೆ: 53

### ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನದ ಸಂಬಂಧ ಮಾನ್ಯ ಶಾಸಕರುಗಳ ಮಾಹಿತಿಗಾಗಿ

ವಿಧಾನ ಪರಿಷತ್ತಿನ 151ನೇ ಅಧಿವೇಶನವು ದಿನಾಂಕ:04.12.2023ರಿಂದ 15.12.2023ರವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವುದರಿಂದ ವಿಧಾನ ಪರಿಷತ್ತಿನ ಸಚಿವಾಲಯವು ದಿನಾಂಕ 02.12.2023ರಿಂದ ಬೆಳಗಾವಿಯ ಸುವರ್ಣ ವಿದಾನಸೌಧದಲ್ಲಿ ಕಾರ್ಯನಿರ್ವಹಿಸಲಿದೆ.

ಅಧಿವೇಶನದಲ್ಲಿ ಪಾಲ್ಗೊಳ್ಳುವ ಮಾನ್ಯ ಶಾಸಕರುಗಳಿಗೆ ಬೆಳಗಾವಿ ನಗರದ ಹೋಟೆಲ್‌ಗಳಲ್ಲಿ ದಿನಾಂಕ:03.12.2023ರಿಂದ ಕೊಠಡಿಗಳನ್ನು ಕಾಯ್ದಿರಿಸಲಾಗಿದೆ. ವಸತಿ ಸೌಕರ್ಯದ ಮಾಹಿತಿಯನ್ನು ಶ್ರೀ ಎಸ್. ನಾಗರಾಜು. ಕ್ಷೇತ್ರಾಧಿಕಾರಿ (ಮೊಬೈಲ್ ದೂರವಾಣಿ ಸಂಖ್ಯೆ 99801-87266 ಇವರಿಂದ ಪಡೆದುಕೊಳ್ಳಲು ಕೋರಲಾಗಿದೆ.

ಮಾನ್ಯ ಶಾಸಕರುಗಳ ಜೊತೆಯಲ್ಲಿ ಆಗಮಿಸುವ ಆಪ್ತ ಸಹಾಯಕರುಗಳು ಹಾಗೂ ವಾಹನ ಚಾಲಕರುಗಳಿಗೆ ಬೆಳಗಾವಿಯಲ್ಲಿ ವಸತಿ ಹಾಗೂ ಸಾರಿಗೆ ವ್ಯವಸ್ಥೆಯನ್ನು ಈ ಹಿಂದಿನಂತೆ ತಮ್ಮ ಹಂತದಲ್ಲಿಯೇ ವ್ಯವಸ್ಥೆ ಮಾಡಿಕೊಳ್ಳಲು ಕೋರಲಾಗಿದೆ.

ಅಧಿವೇಶನದ ಸಮಯದಲ್ಲಿ ಮಾನ್ಯ ಶಾಸಕರುಗಳಿಗೆ ಬೆಳಗಿನ ಉಪಹಾರವನ್ನು ಅವರುಗಳು ವಾಸ್ತವ್ಯ ಹೂಡಲಿರುವ ಹೋಟೆಲ್‌ಗಳಲ್ಲಿಯೇ ವ್ಯವಸ್ಥೆ ಮಾಡಲಾಗಿದ್ದು, ಮದ್ಯಾಹ್ನದ ಊಟದ ವ್ಯವಸ್ಥೆಯನ್ನು ಸುವರ್ಣ ವಿಧಾನಸೌಧದಲ್ಲಿ ಏರ್ಪಡಿಲಾಗಿರುತ್ತದೆ. ರಾತ್ರಿ ಊಟದ ವ್ಯವಸ್ಥೆಯನ್ನು ಈ ಹಿಂದಿನಂತೆ ಮಾನ್ಯ ಶಾಸಕರುಗಳೇ ಮಾಡಿಕೊಳ್ಳಲು ಕೋರಲಾಗಿದೆ.

ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಶಾಸಕರುಗಳಿಗೆ.